# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 903(1005) |
| ಸದಸ್ಯರ ಹೆಸರು | : | ಶ್ರೀ ಎಂ.ಕೆ. ಪ್ರಾಣೇಶ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾಗಿದ್ದ ದಿನಾಂಕ | : | 28.03.2016 |
| ಉತ್ತರಿಸುವವರು | : | ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು |

*****

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅರಣ್ಯ ಪ್ರದೇಶದಲ್ಲಿ ವಾಸವಾಗಿರುವ ಬಡ ಜನರಿಗೆ "ಅಡುಗೆ ಅನಿಲ" (ಗ್ಯಾಸ್ ಸಿಲಿಂಡರ್) ವಿತರಿಸಲಾಗುತ್ತಿದೆಯೇ; | ರಾಜ್ಯದ ಅರಣ್ಯ ಪ್ರದೇಶದಲ್ಲಿ ವಾಸವಾಗಿರುವ ಹಾಗೂ ಅರಣ್ಯದಂಚಿನಲ್ಲಿರುವ ಗ್ರಾಮಗಳಲ್ಲಿನ ಪರಿಶಿಷ್ಟ ಪಂಗಡ ಮತ್ತು ಪರಿಶಿಷ್ಟ ಜಾತಿ ಕುಟುಂಬಗಳಿಗೆ ಅಡುಗೆ ಅನಿಲ ಸಂಪರ್ಕದೊಂದಿಗೆ ಗ್ಯಾಸ್ ಸ್ಟವ್‌ಗಳನ್ನು ವಿತರಿಸಲಾಗುತ್ತಿದೆ. ಆದರೆ, ರಾಜ್ಯ ಅರಣ್ಯ ಪ್ರದೇಶದ ಅಂಚಿನಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನಾಂಗದ ಜನರಿಗೆ ಎಲ್‌ಪಿಜಿ ಗ್ಯಾಸ್ ಸಿಲಿಂಡರ್ ಸಂಪರ್ಕವನ್ನು ಕಲ್ಪಿಸಲಾಗಿದೆ. |
| ಆ) | 2014-15 ಮತ್ತು 2015-16ನೇ ಸಾಲಿನಲ್ಲಿ ರಾಜ್ಯದ ಎಷ್ಟು ಪರಿಶಿಷ್ಟ ಪಂಗಡ ಮತ್ತು ಪರಿಶಿಷ್ಟ ಜಾತಿ ಕುಟುಂಬಗಳಿಗೆ ಈ ಯೋಜನೆಯಡಿ ಅನುಕೂಲ ಮಾಡಿಕೊಡಲಾಗಿದೆ; | ಕಳೆದ ಎರಡು ವರ್ಷಗಳಲ್ಲಿ ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಗಳಡಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಕುಟುಂಬಗಳಿಗೆ ಎಲ್.ಪಿ.ಜಿ. ಸಂಪರ್ಕ ವಿತರಿಸಿರುವ ವಿವರಗಳು ಈ ಕೆಳಕಂಡಂತಿದೆ.<br><table><tr><th>ವರ್ಷ</th><th>ಎಸ್‌ಸಿಪಿ</th><th>ಟಿಎಸ್‌ಪಿ</th></tr><tr><td>2014-15</td><td>22466</td><td>5395</td></tr><tr><td>2015-16 (ಫೆಬ್ರವರಿ-2016ರ ಅಂತ್ಯಕ್ಕೆ)</td><td>18244</td><td>5439</td></tr></table>ವನ್ಯಜೀವಿ ಘಟಕದಿಂದ 2014-15ರಲ್ಲಿ 167 ಸಂಖ್ಯೆಯ ಅಡುಗೆ ಅನಿಲ ಸಂಪರ್ಕ ಮತ್ತು ಸ್ಟವ್‌ಗಳನ್ನು ವಿತರಿಸಲಾಗಿದೆ ಹಾಗೂ 2015-16ನೇ ಸಾಲಿನಲ್ಲಿ ಯಾವುದೇ ಅಡುಗೆ ಅನಿಲ ಸಂಪರ್ಕ ಕಲ್ಪಿಸಿರುವುದಿಲ್ಲ. |
| ಇ) | ಬಿ.ಪಿ.ಎಲ್ ಕಾರ್ಡ್ ಹೊಂದಿರುವ ಸಾರ್ವಜನಿಕರಿಗೆ ಈ ಯೋಜನೆಯಲ್ಲಿ ಅನುಕೂಲ ಮಾಡಿಕೊಡಲಾಗುತ್ತಿದೆ; ಇಲ್ಲವಾದಲ್ಲಿ, ಮುಂದಿನ ದಿನಗಳಲ್ಲಿ ಅನುಕೂಲ ಮಾಡಿಕೊಡುವ ವಿಚಾರ ಸರ್ಕಾರದ ಮುಂದೆ ಇದೆಯೇ; | ಬಿ.ಪಿ.ಎಲ್., ಎ.ಪಿ.ಎಲ್ ಮಾನದಂಡಗಳಿಲ್ಲದೇ ಎಲ್ಲ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕುಟುಂಬಗಳಿಗೆ ಈ ಸೌಲಭ್ಯವನ್ನು ನೀಡಲಾಗುತ್ತಿದೆ. |

ಈ) ಚಿಕ್ಕಮಗಳೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಅರಣ್ಯ ಪ್ರದೇಶದ ಎಷ್ಟು ಕುಟುಂಬಗಳಿಗೆ ಈ ಯೋಜನೆಯಡಿ ಅನುಕೂಲ ಮಾಡಿಕೊಡಲಾಗಿದೆ? (ಸಂಪೂರ್ಣ ವಿವರ ನೀಡುವುದು)

ಚಿಕ್ಕಮಗಳೂರು ಜಿಲ್ಲೆಗೆ ಪರಿಶಿಷ್ಟ ಜಾತಿ/ಪಂಗಡದ ಜನಾಂಗದವರಿಗೆ ಎಲ್.ಪಿ.ಜಿ. ಗ್ಯಾಸ್ ಸಂಪರ್ಕವನ್ನು ವಿತರಿಸಿರುವ ವಿವರ ಈ ಕೆಳಕಂಡಂತಿದೆ.

| ವರ್ಷ | ಎಸ್‌ಸಿಪಿ | ಟಿಎಸ್‌ಪಿ |
|---|---|---|
| 2014-15 | 300 | 15[illegible] |
| 2015-16 | 210 | 203 |

ಭದ್ರಾ ಹುಲಿ ಸಂರಕ್ಷಿತ ಚಿಕ್ಕಮಗಳೂರು ವಿಭಾಗದ ಆಸುಪಾಸಿನಲ್ಲಿರುವ ಗ್ರಾಮಗಳ ಪರಿಶಿಷ್ಟ ಜಾತಿಯ ಫಲಾನುಭವಿಗಳಿಗೆ 2014-15ನೇ ಸಾಲಿನಲ್ಲಿ ಈ ಕೆಳಕಂಡಂತೆ ಸಾಮಾಗ್ರಿಗಳನ್ನು ಸರ್ಕಾರದ ಯೋಜನೆಯಂತೆ ಉಚಿತವಾಗಿ ನೀಡಲಾಗಿದೆ. 2015-16ನೇ ಸಾಲಿನಲ್ಲಿ ಯಾವುದೇ ಅಡುಗೆ ಅನಿಲ ಸಂಪರ್ಕ ಕಲ್ಪಿಸಿರುವುದಿಲ್ಲ.

| ಕ್ರ.ಸಂ | ಸಾಮಾಗ್ರಿಗಳು | ಫಲಾನುಭವಿಗಳ ಸಂಖ್ಯೆ |
|---|---|---|
| 1 | ಸರಳ ಒಲೆ | 11 |
| 2 | ಅಡುಗೆ ಅನಿಲ | 26 |
| 3 | ಸೋಲಾರ್ ವಾಟರ್ ಹೀಟರ್ | 3 |

ಉ) ಈ ಯೋಜನೆಯಡಿ ಹೆಚ್ಚುವರಿಯಾಗಿ ಅಡುಗೆ ಅನಿಲ ವಿತರಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ; ಈ ಯೋಜನೆಯ ಅನುಕೂಲ ಪಡೆದುಕೊಳ್ಳಲು ಇರುವ ಮಾನದಂಡಗಳೇನು?

ಹೌದು.

2016-17ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಪಶ್ಚಿಮ ಘಟ್ಟದ ಸೂಕ್ಷ್ಮ ಅರಣ್ಯ ಪ್ರದೇಶಗಳು, ವನ್ಯಜೀವಿ ಅಭಯಾರಣ್ಯಗಳ ಸೂಕ್ಷ್ಮ ಪ್ರದೇಶಗಳಲ್ಲಿ, ಪ್ರಾರಂಭಿಕವಾಗಿ ಚಾಮರಾಜನಗರ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ವಾಸಿಸುತ್ತಿರುವ ಸಾಮಾನ್ಯ ವರ್ಗದ ಕುಟುಂಬಗಳಿಗೆ ಎಲ್.ಪಿ.ಜಿ. ಸಂಪರ್ಕ ಒದಗಿಸಲಾಗುವುದು ಎಂದು ಘೋಷಿಸಲಾಗಿದ್ದು, ಅದರಂತೆ ಎಲ್.ಪಿ.ಜಿ. ಸಂಪರ್ಕ ಕಲ್ಪಿಸಲಾಗುತ್ತಿದೆ. ಈ ಮೊದಲಿನ ಯೋಜನೆಯಲ್ಲಿ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಫಲಾನುಭವಿಗಳಿಗೆ ಎಲ್.ಪಿ.ಜಿ. ಸಂಪರ್ಕ ನೀಡಿರುವುದರಿಂದ ಈ ಯೋಜನೆಯಲ್ಲಿ ಸಾಮಾನ್ಯ ವರ್ಗದ ಹಾಗೂ ಇತರೆ ಫಲಾನುಭವಿಗಳಿಗೆ ಎಲ್.ಪಿ.ಜಿ. ಸಂಪರ್ಕ ಕಲ್ಪಿಸಲಾಗುತ್ತಿದೆ.

ಸಂಖ್ಯೆ: ಅಪಜೀ 107 ಎಫ್‌ಟಿಎಸ್ 2016

(ಬಿ. ರಮಾನಾಥ ರೈ)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು